# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ 2 ಜಂಟಿ ನಿರ್ದೇಶಕರ ಹುದ್ದೆಗಳನ್ನು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ನಿಯೋಜಿಸುವ ಕುರಿತು

ಓದಲಾಗಿದೆ : (1) ಸರ್ಕಾರದ ಅಧೀನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧಿಸೂಚನೆ ಸಂಖ್ಯೆ: ವಾಕೈ 44 ಕೈಸೇವಿ 2012, ದಿನಾಂಕ: **23.12.2013**

(2) ದಿನಾಂಕ: **30.01.2021** ರಂದು ನಡೆದ **370** ನೇ ಮಂಡಳಿ ಸಭೆಯ ನಡವಳಿ

(3) ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಇವರ ಪತ್ರ ಸಂಖ್ಯೆ: ಎಡಿಎಂ-**1151**- Vol III – **2021**, ದಿನಾಂಕ: **24.02.2021** ರ

**- - 0 - -**

<u>ಪ್ರಸ್ತಾವನೆ</u> :-

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ 2 ಜಂಟಿ ನಿರ್ದೇಶಕರ ಹುದ್ದೆಗಳನ್ನು ಎಕ್ಸ್ ಕೇಡರ್ (Ex-Cadre) ಹುದ್ದೆಗಳೆಂದು ಗುರುತಿಸಿ, ಈ ಹುದ್ದೆಗಳನ್ನು ನಿಯೋಜನೆ ಮೇರೆಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ನೇಮಿಸಲು ಮೇಲೆ (1)ರಲ್ಲಿ ಓದಲಾದ ಆದೇಶದನ್ವಯ ಜಾರಿಗೆ ತರಲಾಗಿದೆ.

ಕೆ.ಐ.ಎ.ಡಿ.ಬಿ.ಯಲ್ಲಿ ಕೆಲಸ ಕಾರ್ಯಗಳ ಒತ್ತಡವು ಹೆಚ್ಚಾಗಿದ್ದು, ಇದುವರೆವಿಗೂ ರಾಜ್ಯದಾದ್ಯಂತ **180** ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಿದ್ದು, ಹೊಸ ಕೈಗಾರಿಕಾ ಪ್ರದೇಶಗಳ ಸ್ಥಾಪನೆಗಾಗಿ ಸಾವಿರಾರು ಎಕರೆ ಜಮೀನನ್ನು ಸ್ವಾಧೀನಪಡಿಸಲಾಗುತ್ತಿದ್ದು, ರಾಜ್ಯ ಉನ್ನತ ಮಟ್ಟದ ಅನುಮೋದನಾ ಸಮಿತಿ, ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿ, ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿಗಳಲ್ಲಿ ಅನುಮೋದನೆಯಾದ ಯೋಜನೆಗಳಿಗೆ ಆದ್ಯತೆಯ ಮೇಲೆ ಜಮೀನನ್ನು ಹಂಚಿಕೆ ಮಾಡಬೇಕಾಗಿದ್ದು, ಬೆಂಗಳೂರು-ಚೆನ್ನೈ ಕೈಗಾರಿಕಾ ಕಾರಿಡಾರ್ ಯೋಜನೆ, ಬೆಂಗಳೂರು-ಮುಂಬೈ ಎಕನಾಮಿಕ್ ಕಾರಿಡಾರ್ ಯೋಜನೆ, ವಲಯವಾರು ಪಾರ್ಕ್ ಗಳ ಸ್ಥಾಪನೆ, ವಿಮಾನ ನಿಲ್ದಾಣಗಳು, ಬೆಂಗಳೂರು ಮೆಟ್ರೋ, ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರದ ಯೋಜನೆಗಳಿಗಾಗಿ, ಈಸ್ ಆಫ್ ಡೂಯಿಂಗ್ ಬಿಸಿನೆಸ್

ಅನುಷ್ಠಾನಗೊಳಿಸಲು, ಈ ಎಲ್ಲಾ ಕೆಲಸ ಕಾರ್ಯಗಳನ್ನು ಸಮರ್ಪಕವಾಗಿ ನಿಗಧಿತ ಅವಧಿಯೊಳಗಾಗಿ ಕೆ.ಐ.ಎ.ಡಿ.ಬಿ.ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರಿಗೆ ನೆರವು ನೀಡಲು ಹಾಗೂ **Investment Promotion & Facilitation and EODB** ವಿಷಯದಲ್ಲಿ ಅನುಭವ ಹೊಂದಿರುವ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಜಂಟಿ ನಿರ್ದೇಶಕರ ವೃಂದದ ಅಧಿಕಾರಿಗಳನ್ನು ನಿಯೋಜನೆ ಸೇವೆಯ ಮೇರೆಗೆ ಕೆ.ಐ.ಎ.ಡಿ.ಬಿ.ಗೆ ಪಡೆಯುವ ಅವಶ್ಯಕತೆ ಇರುತ್ತದೆ.

ಈ ಮೇಲ್ಕಂಡ ಕಾರಣಗಳ ಹಿನ್ನೆಲೆಯಲ್ಲಿ, ಕೆ.ಐ.ಎ.ಡಿ.ಬಿ.ಯಲ್ಲಿ ಈಗಾಗಲೇ 2 ಜಂಟಿ ನಿರ್ದೇಶಕರ ಎಕ್ಸ್ ಕೇಡರ್ ಹುದ್ದೆಗಳನ್ನು ಗುರುತಿಸಿರುವುದರಿಂದ ಕೆ.ಐ.ಎ.ಡಿ.ಬಿ.ಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಈ ಎರಡೂ ಹುದ್ದೆಗಳನ್ನು ಅಳವಡಿಸುವ ಷರತ್ತಿಗೆ ಒಳಪಟ್ಟು, 2 ಜಂಟಿ ನಿರ್ದೇಶಕರ ಹುದ್ದೆಗಳನ್ನು ಕೆ.ಐ.ಎ.ಡಿ.ಬಿ.ಗೆ ನಿಯೋಜಿಸುವ ಕುರಿತು ಸೂಕ್ತ ಆದೇಶ ಹೊರಡಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಮೇಲೆ (2)ರಲ್ಲಿ ಓದಲಾದ ದಿನಾಂಕ: **30.01.2021**ರ **370**ನೇ ಕೆ.ಐ.ಎ.ಡಿ. ಮಂಡಳಿ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಅದರಂತೆ, ಕೆ.ಐ.ಎ.ಡಿ.ಬಿ.ಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಜಂಟಿ ನಿರ್ದೇಶಕರುಗಳ ಹುದ್ದೆಗಳನ್ನು ಅಳವಡಿಸಿಕೊಳ್ಳುವ ಷರತ್ತಿಗೆ ಒಳಪಟ್ಟು 2 ಜಂಟಿ ನಿರ್ದೇಶಕರ ಹುದ್ದೆಗಳನ್ನು ಮಂಡಳಿಗೆ ನಿಯೋಜಿಸುವ ಪ್ರಸ್ತಾವನೆಗೆ ಅನುಮೋದನೆ ನೀಡುವಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಇವರು ಮೇಲೆ (3)ರ ಓದಲಾದ ಪ್ರಸ್ತಾವನೆಯಲ್ಲಿ ಕೋರಿದ್ದಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರ ಈ ಕೆಳಕಂಡಂತೆ ಆದೇಶಿಸಿದೆ :-

**ಸರ್ಕಾರಿ ಆದೇಶ ಸಂಖ್ಯೆ: ಸಿಐ 20 ಎಸ್.ಪಿವಿ (ಇ) 2021,**

**ಬೆಂಗಳೂರು ದಿನಾಂಕ: 25.02.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ 2 ಜಂಟಿ ನಿರ್ದೇಶಕರುಗಳ ಹುದ್ದೆಗಳನ್ನು ಅಳವಡಿಸಿಕೊಳ್ಳುವ ಷರತ್ತಿಗೆ ಒಳಪಟ್ಟು, ಈ 2 ಜಂಟಿ

ನಿರ್ದೇಶಕರ ಹುದ್ದೆಗಳನ್ನು ಕೆ.ಐ.ಎ.ಡಿ.ಬಿ.ಗೆ ನಿಯೋಜನೆ ಮೇರೆಗೆ ನೇಮಿಸಿಕೊಳ್ಳಲು ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ
ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
ಎನ್. ಕುಮಾರ್
(ಎನ್. ಕುಮಾರ್) 25/2/2021.
ಸರ್ಕಾರದ ಅಧೀನ ಕಾರ್ಯದರ್ಶಿ
(ಕೈ.ಅ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ರಾಜ್ಯಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವಂತೆ ಕೋರಿದೆ.

ಪ್ರತಿ:

1. ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಖನಿಜ ಭವನ, ರೇಸ್.ಕೋರ್ಸ್ ರಸ್ತೆ, ಬೆಂಗಳೂರು.
3. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
5. ನಿರ್ದೇಶಕರು (ತಾಂತ್ರಿಕ ಕೋಶ) ರವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು